# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 881 |
| ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 14/07/2023 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸರ್ವರ್ ಸಮಸ್ಯೆ ಕಾರಣ ಗೃಹಲಕ್ಷ್ಮಿ ಯೋಜನೆ ನೋಂದಣಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | ಗೃಹಲಕ್ಷ್ಮಿ ಯೋಜನೆಯ ಅರ್ಜಿಯನ್ನು ನೊಂದಾಯಿಸುವ ಪ್ರಕ್ರಿಯೆ ಪ್ರಾರಂಭವಾಗಿಲ್ಲದೇ ಇರುವುದರಿಂದ ಅನ್ವಯಿಸುವುದಿಲ್ಲ. |
| ಆ | ಈ ಯೋಜನೆಗೆ ವಾರ್ಷಿಕ ತಗಲುವ ಮೊತ್ತವೆಷ್ಟು; ಈ ಮೊತ್ತವನ್ನು ಹೇಗೆ ಭರಿಸಲಾಗುವುದು; (ಮಾಹಿತಿ ನೀಡುವುದು) | ಗೃಹಲಕ್ಷ್ಮಿ ಯೋಜನೆಗೆ ರೂ.30,000/- ಕೋಟಿ ಅಂದಾಜಿಸಲಾಗಿದೆ.<br><br>2023-24ನೇ ಸಾಲಿನ ಜುಲೈ ಮಾಹೆಯಲ್ಲಿ ಮಂಡಿಸಲಾಗಿರುವ ಆಯವ್ಯಯದಲ್ಲಿ ಈ ಯೋಜನೆಗೆ ರೂ.17,500.00 ಕೋಟಿ ಅನುದಾನ ಒದಗಿಸಲಾಗಿದೆ |
| ಇ. | ಗೃಹಲಕ್ಷ್ಮಿ ಯೋಜನೆ ಯಾವಾಗ ಕಾರ್ಯರೂಪಕ್ಕೆ ಬರಲಿದೆ? (ವಿವರ ನೀಡುವುದು) | ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ 2023ನೇ ಸಾಲಿನ ಆಗಸ್ಟ್ ತಿಂಗಳಿನಲ್ಲಿ ಫಲಾನುಭವಿಗಳ ಖಾತೆಗೆ ರೂ. 2000/- ಗಳನ್ನು ಜಮಾ ಮಾಡಲಾಗುವುದು. |

**ಸಂಖ್ಯೆ: ಮಮಇ 104 ಮಮಅ 2023**

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಸಚಿವರು.